# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬೆಳಮಗಿ ಗ್ರಾಮ ಪಂಚಾಯಿತಿ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅ.ಸ.ಪ.ಸಂ. ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ–5322/2012/ಎಆರ್‌ಇ–5 ದಿನಾಂಕ:19–09–2016

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:–16–09–2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬೆಳಮಗಿ ಗ್ರಾಮ ಪಂಚಾಯಿತಿ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ, ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಶರಣಪ್ಪ ಚಂದ್ರಪ್ಪ ಇವರ ಜಮೀನಿನಲ್ಲಿ ಕಾಮಗಾರಿಗೆ ಸಂಬಂಧಿಸಿದಂತೆ ತನ್ನ, ಕುಟುಂಬದ ಮತ್ತು ಕೂಲಿಕಾರರ ಹೆಸರಿನಲ್ಲಿ ಬೋಗಸ್ ಬಿಲ್ ತಯಾರಿಸಿ ನಕಲಿ ಸಹಿ ಮಾಡಿ ರೂ.14,625/– ನ್ನು ಡ್ರಾ ಮಾಡಿ ಹಣ ದುರುಪಯೋಗ ಮಾಡಿರುತ್ತಾರೆಂದು ದೂರುದಾರರಾದ ಶ್ರೀ ಧನರಾಜ ತಂದೆ ರಾಮಲಿಂಗಪ್ಪ ಮುರುದ್, ಬೆಳಮಗಿ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆ ಅನುಸಾರ

"ಶ್ರೀ ಧನರಾಜ ತಂದೆ ರಾಮಲಿಂಗಪ್ಪ ಮುರುದ್, ಇವರಿಗೆ ಉದ್ಯೋಗ ಚೀಟಿಯನ್ನು ವಿತರಿಸಲಾಗಿದ್ದು ಇವರು ಶರಣಪ್ಪ ಚಂದ್ರಪ್ಪ ಇವರ ಜಮೀನಿನಲ್ಲಿ ಬದು ನಿರ್ಮಾಣ ಕಾಮಗಾರಿಯನ್ನು ಕೈಗೊಂಡಿರುತ್ತಾರೆ ಮತ್ತು ಈ ಸಂಬಂಧ ಹಣವನ್ನು ಪಡೆದಿರುತ್ತಾರೆ ಎಂದು ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಶ್ರೀ ಅಶೋಕ.ಡಿ. ಸುತಾರ, ಅಧ್ಯಕ್ಷರು, ತಿಳಿಸಿದ್ದು ಆದರೆ ತಮ್ಮ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಹೇಳಿಕೆಯನ್ನು ಸಮರ್ಥಿಸಲು ದಾಖಲೆಗಳನ್ನು ಸಲ್ಲಿಸಿರುವುದಿಲ್ಲ."

ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಇವರು ತಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವರ್ತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಾಮಗಳು 1996 ರ ನಿಯಮ 3(1) ಉಕ್ತವಾದ ದುರ್ನಡತೆ ಎಸಗಿ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕೋರಿರುತ್ತಾರೆ. ಮತ್ತು ಶ್ರೀ ಅಶೋಕ.ಡಿ. ಸುತಾರ, ಅಧ್ಯಕ್ಷರು, ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯಡಿ ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/621/ಗ್ರಾಪಂಕಾ/2016 ಬೆಂಗಳೂರು, ದಿನಾಂಕ:10-11-2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬೆಳಮಗಿ ಗ್ರಾಮ ಪಂಚಾಯಿತಿ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ.
6. ಶ್ರೀ ದಯಾನಂದ ಜಾದವ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬೆಳಮಗಿ ಗ್ರಾಮ ಪಂಚಾಯಿತಿ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ.
7. ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.